ಸಾಕ್ಷಿಯನ್ನು ದಿನಾಂಕಃ 12.04.2017 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ನಾನು ನನ್ನ ವಿಚಾರಣೆ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ಅದರಲ್ಲಿರುವ ಸಹಿ ನನ್ನದೇ ಇರುತ್ತದೆ.

ಮುಖ್ಯ ವಿಚಾರಣೆ ಃ ಶ್ರೀ ಕೆ.ಎಂ. ವಾದಿ ಪರ ವಕೀಲರಿಂದಃ

ಈಗ ನಾನು ನ್ಯಾಯಾಲಯದ ಮುಂದೆ ಹಾಜರುಪಡಿಸಿರುವ ದಾಖಲಾತಿಯನ್ನು ನೋಡಿ ಗುರುತಿಸಿದ್ದು, ಅವುಗಳ ಪೈಕಿ ದಿಃ 13.12.1965ನೇ ಇಸವಿಯ ಒಂದು ನೋಂದಾಯಿತ ಕ್ರಯಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 1 ಎಂದು, ತಹಸೀಲ್ದಾರ್‌ರವರು ನೀಡಿರುವ ಒಂದು ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 2 ಎಂದು, ಒಂದು ಗಣಕೀಕೃತ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 3 ಎಂದು ಗುರುತಿಸಲಾಯಿತು. ಮೇಲ್ಕಂಡ ಕಾರಣಗಳಿಂದ ದಾವೆಯಲ್ಲಿ ಕೋರಿರುವಂತೆ ಡಿಕ್ರಿ ಮಾಡಬೇಕೆಂದು ಕೋರುತ್ತೇನೆ.

ಪಾಟೀ ಸವಾಲುಃ ಪ್ರತಿವಾದಿಗಳ ಪರ ವಕೀಲರ ಕೋರಿಕೆ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸಾ ಸ ಇ ಒ.,

ಹೆಚ್ಚುವರಿ ಸಿಜೆ ಮತ್ತು ಜೆ.ಎಂ.ಎಫ್.ಸಿ,
ಹೆಚ್.ಡಿ.ಕೋಟೆ.